ಕನ್ನಡಪ್ರಭ
ಶುಕ್ರವಾರ 10.3.2023

ಶ್ಲಾಘನೀಯ | ವಿಟಿಯು ಕುಲಪತಿ ಡಾ.ಎಸ್. ವಿದ್ಯಾಶಂಕರ್ ಅಭಿಮತ

# ತಂತ್ರಜ್ಞಾನದಲ್ಲಿ ದೇಶ ಮುನ್ನಡೆಸುತ್ತಿರುವ ಕರ್ನಾಟಕ

• **ಕನ್ನಡಪ್ರಭ ವಾರ್ತೆ** ಮೈಸೂರು

ಕರ್ನಾಟಕವು ತಂತ್ರಜ್ಞಾನ ದೈತ್ಯವಾಗಿ ದೇಶವನ್ನು ಮುನ್ನಡೆಸುತ್ತಿದೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಕುಲಪತಿ ಪ್ರೊ.ಎಸ್. ವಿದ್ಯಾಶಂಕರ್ ತಿಳಿಸಿದರು.

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಮೈಸೂರಿನ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜಿನ ಎಚ್. ಕೆಂಪೇಗೌಡ ಒಳಾಂಗಣ ಕ್ರೀಡಾ ಸಂಕೀರ್ಣದಲ್ಲಿ ಗುರುವಾರ ಆಯೋಜಿಸಿದ್ದ ಯುವ-20 ಶೃಂಗಸಭೆಯ ಉದ್ಘಾಟಿಸಿ ಮಾತನಾಡಿದ ಅವರು, ಪರಿಣಾಮಕಾರಿ ತಾಂತ್ರಿಕ ಜ್ಞಾನ, ವಿಶ್ಲೇಷಣಾತ್ಮಕ, ಸಮಸ್ಯೆ ಪರಿಹಾರ, ಸೃಜನಶೀಲ ಚಿಂತನೆ, ಪರಸ್ಪರ, ಸಂವಹನ, ತಂಡದ ಕೆಲಸ ಮತ್ತು ವಾಣಿಜ್ಯ ಬಳಕೆಯಂತಹ ಪ್ರಮುಖ ಕೌಶಲ್ಯಗಳನ್ನು ಯುವಕರು ಹೊಂದಿರಬೇಕು ಎಂದು ಸಲಹೆ ನೀಡಿದರು.

ಕೈಗಾರಿಕೆ- ಅಕಾಡೆಮಿಯ ಕೌಶಲ್ಯ ಆಧಾರಿತ ಶಿಕ್ಷಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವುದು ಶೃಂಗಸಭೆಯ ಉದ್ದೇಶವಾಗಿದೆ ಎಂದು ಅವರು ಹೇಳಿದರು.




ಮೈಸೂರಿನ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜಿನಲ್ಲಿ ಗುರುವಾರ ನಡೆದ ಯುವ-20 ಶೃಂಗಸಭೆಯನ್ನು ವಿಟಿಯು ಕುಲಪತಿ ಡಾ. ಎಸ್. ವಿದ್ಯಾಶಂಕರ್ ಉದ್ಘಾಟಿಸಿದರು. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ. ವಿಶ್ವನಾಥ್ ಇತರರಿದ್ದರು.

ವಿವಿಸಿಇ ಪ್ರಾಂಶುಪಾಲ ಡಾ.ಬಿ. ಸದಾಶಿವೇಗೌಡ ಮಾತನಾಡಿ, ಹೊಸ ಆಲೋಚನೆಗಳನ್ನು ರೂಪಿಸಲು ಮತ್ತು ಮುಂದಿನ ಒಂದು ವರ್ಷದಲ್ಲಿ ಸಾಮೂಹಿಕ ಕ್ರಿಯೆಯನ್ನು ವೇಗಗೊಳಿಸಲು ಜಿ20 ಜಾಗತಿಕ ಪ್ರಧಾನ ಮೂವರ್ ಆಗಿ ಕಾರ್ಯನಿರ್ವಹಿಸು ತ್ತದೆಂದು ಖಚಿತಪಡಿಸಿಕೊಳ್ಳಲು ಭಾರತವು ಶ್ರಮಿಸುತ್ತದೆ ಎಂದು ತಿಳಿಸಿದರು.

ಮೈಸೂರು ಮತ್ತು ಮಂಡ್ಯ ಜಿಲ್ಲೆಗಳ ವಿವಿಧ ಎಂಜಿನಿಯರಿಂಗ್ ಸಂಸ್ಥೆಗಳ ಪ್ರಾಂಶುಪಾಲರು, 5000 ಹೆಚ್ಚು ವಿದ್ಯಾರ್ಥಿಗಳು ಮತ್ತು ಅಧ್ಯಾಪಕರು ಪಾಲ್ಗೊಂಡಿದ್ದರು. ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣನವರ್ ಮೊದಲಾದವರು ಈ ಸಂದರ್ಭದಲ್ಲಿ ಇದ್ದರು.